ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ	:	1451(1724)
ಸದಸ್ಯರ ಹೆಸರು	:	ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ	:	23/03/2020.
ಉತ್ತರಿಸುವ ಸಚಿವರು	:	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು.

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಅನುದಾನಿತ ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ನಿವೃತ್ತಿ ಹಾಗೂ ಇನ್ನಿತರೆ ಕಾರಣಗಳಿಂದ ಖಾಲಿ ಇರುವ ಸಹ ಶಿಕ್ಷಕರ ಮತ್ತು ಉಪನ್ಯಾಸಕರ ಹುದ್ದೆಗಳ ಸಂಖ್ಯೆ ಎಷ್ಟು;	ಅನುದಾನಿತ ಖಾಸಗಿ ಪ್ರೌಢಶಾಲೆಗಳಲ್ಲಿ ಒಟ್ಟು 3562 ಹುದ್ದೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಒಟ್ಟು 908 ಉಪನ್ಯಾಸಕರ ಹುದ್ದೆಗಳು ಖಾಲಿ ಇರುತ್ತವೆ.
ಆ)	ಯಾವ ಅವಧಿಯಿಂದ ಸದರಿ ಹುದ್ದೆಗಳು ಖಾಲಿ ಇವೆ;	ದಿನಾಂಕ:01.01.2016 ರಿಂದ ಸದರಿ ಹುದ್ದೆಗಳು ಖಾಲಿಯಿರುತ್ತವೆ.
ಇ)	ಸದರಿ ಹುದ್ದೆಗಳು ಖಾಲಿ ಇರುವುದರಿಂದ ವಿದ್ಯಾರ್ಥಿಗಳ ಗುಣಮಟ್ಟದ ಶಿಕ್ಷಣಕ್ಕೆ ಅಡ್ಡಿ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಸರ್ಕಾರದ ಆದೇಶ ಸಂಖ್ಯೆ : ಇಡಿ 14 ಎಸ್ಇಪಿ 2017, ದಿನಾಂಕ : 25/09/2018ರಲ್ಲಿ ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ದಿನಾಂಕ : 31/12/2015ರವರೆಗೆ ನಿಧನ, ನಿವೃತ್ತಿ, ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ತೆರವಾದ ಒಟ್ಟು 882 ಖಾಲಿಯಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿರುತ್ತದೆ. ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ದಿನಾಂಕ:31.12.2015ರ ವರೆಗೆ ವಿವಿಧ ಕಾರಣಗಳಿಂದ ಖಾಲಿಯಾದ ಮತ್ತು ನಿಗದಿತ 20 ಗಂಟೆಗಳ ಕಾರ್ಯಭಾರವನ್ನು ಹೊಂದಿರುವ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಆದೇಶ ಸಂಖ್ಯೆ: ಇಡಿ 144 ಟಿಪಿಯು 2016, ದಿನಾಂಕ: 09.02.2017 ಮತ್ತು ದಿನಾಂಕ: 12.09.2017 ರಲ್ಲಿ ಕೆಲವು ಷರತ್ತುಗಳೊಂದಿಗೆ ದಿನಾಂಕ:31.12.2015ರವರೆಗೆ ಖಾಲಿಯಾದ ಒಟ್ಟು 328 ವಿವಿಧ ವಿಷಯಗಳ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ. ಖಾಸಗಿ ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳನ್ನು ನಡೆಸುತ್ತಿರುವ ಶಿಕ್ಷಣ ಸಂಸ್ಥೆಗಳು ದಿನಾಂಕ : 01/01/2016ರ ನಂತರ ಖಾಲಿಯಾಗಿರುವ ಬೋಧಕ ಮತ್ತು ದೈಹಿಕ ಶಿಕ್ಷಕ ವೃಂದದ ಹುದ್ದೆಗಳನ್ನು ಆಡಳಿತ ಮಂಡಳಿಯ ಆಂತರಿಕ ಸಂಪನ್ಮೂಲ ಬಳಸಿಕೊಂಡು, ಅನುದಾನ ರಹಿತವಾಗಿ ಸೇವೆ ಪಡೆಯುವುದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟಕ್ಕೆ ಯಾವುದೇ ಅಡ್ಡಿ ಉಂಟಾಗಿರುವುದಿಲ್ಲ.

ಈ)	ಸರ್ಕಾರ ಇದುವರೆಗೆ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳೇನು;	ಅನುದಾನಿತ ಪ್ರೌಢಶಾಲೆಗಳಿಗೆ ಸಂಬಂಧಿಸಿದಂತೆ, ದಿನಾಂಕ:01.01.2016ರ ನಂತರದಲ್ಲಿ ಖಾಲಿಯಾಗಿರುವ ಹುದ್ದೆಗಳ ಮಾಹಿತಿಯನ್ನು ಆಯುಕ್ತಾಲಯವು ಸರ್ಕಾರಕ್ಕೆ ಸಲ್ಲಿಸಿದ್ದು, ಈ ಪೈಕಿ ಯಾವ ಕಾಲಮಿತಿಯವರೆಗೆ ಖಾಲಿಯಾಗಿರುವ ಹುದ್ದೆಗಳನ್ನು ಭರ್ತಿ ಮಾಡಬೇಕೆಂಬ ಬಗ್ಗೆ ಸರ್ಕಾರವು ನಿಲುವನ್ನು ಇನ್ನು ತಳೆದಿರುವುದಿಲ್ಲ.
ಉ)	ಯಾವ ಅವಧಿಯವರೆಗೆ ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುವುದು?	

ಇಪಿ 110 ಎಸ್‌ಇಎಸ್ 2020

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು.